**ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯನಿರ್ಣಯ ಮಂಡಲಿ, 6ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು.**

ಸಂಖ್ಯೆ:ಎ8/ಎಸ್.ಎಸ್.ಎಲ್.ಸಿ/ಪೂ.ಸಿ.ಪ/45/2021-22 ದಿನಾಂಕ: 30.01.2023

**:: ಸುತ್ತೋಲೆ ::**

ವಿಷಯ:- 2022-23ನೇ ಸಾಲಿನ ಎಸ್‌ಎಸ್‌ಎಲ್‌ಸಿ ಪೂರ್ವ ಸಿದ್ಧತಾ ಪರೀಕ್ಷೆಯನ್ನು ನಡೆಸುವ ಕುರಿತು.

ಉಲ್ಲೇಖ:-
1. ಸರ್ಕಾರದ ಆದೇಶ ಸಂಖ್ಯೆ:ಇಪಿ 197 ಎಸ್‌ಎಲ್‌ಬಿ 2021 ದಿನಾಂಕ:25.01.2023.
2. ಈ ಕಛೇರಿ ಸುತ್ತೋಲೆ ಸಂಖ್ಯೆ:ಎ8/ಎಸ್‌ಎಸ್‌ಎಲ್‌ಸಿ/ಪ್ರ.ಪ.ಸ್ವ/12/2022-23 ದಿನಾಂಕ:11.07.2022.
3. ಈ ಕಛೇರಿ ಅಧಿಸೂಚನೆ ಸಂಖ್ಯೆ:ಎ8/ಎಸ್‌ಎಸ್‌ಎಲ್‌ಸಿ.ಅಧಿಸೂಚನೆ/ಮಾರ್ಚ್-23/14/2022-23 ದಿನಾಂಕ:17.09.2022.

* * * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, 2022-23ನೇ ಸಾಲಿನ ಎಸ್‌ಎಸ್‌ಎಲ್‌ಸಿ ಪೂರ್ವ ಸಿದ್ಧತಾ ಪರೀಕ್ಷೆಯನ್ನು ನಡೆಸಲು ಉಲ್ಲೇಖ-1ರಲ್ಲಿ ಸರ್ಕಾರದಿಂದ ಆದೇಶಿಸಲಾಗಿರುತ್ತದೆ. ಸದರಿ ಆದೇಶದಲ್ಲಿ ಪೂರ್ವ ಸಿದ್ಧತಾ ಪರೀಕ್ಷೆಗೆ ಸಂಬಂಧಿಸಿದಂತೆ ಮಾದರಿ ಪ್ರಶ್ನೆಪತ್ರಿಕೆಯನ್ನು ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯನಿರ್ಣಯ ಮಂಡಲಿಯಿಂದ ಕ್ಷೇತ್ರ ಶಿಕ್ಷಣಾಧಿಕಾರಿಗಳ ಲಾಗಿನ್‌ಗೆ ಅಪ್‌ಲೋಡ್ ಮಾಡುವಂತೆ ಮತ್ತು ಸದರಿ ಪರೀಕ್ಷೆಗೆ ವೇಳಾಪಟ್ಟಿಯನ್ನು ಪ್ರಕಟಿಸುವಂತೆ ಆದೇಶಿಸಲಾಗಿರುತ್ತದೆ. ಅದರಂತೆ ದಿನಾಂಕ:23.02.2023 ರಿಂದ 01.03.2023ರವರೆಗೆ ಪೂರ್ವಸಿದ್ಧತಾ ಪರೀಕ್ಷೆಯನ್ನು ನಡೆಸಲು ವೇಳಾಪಟ್ಟಿ ಮತ್ತು ಮಾದರಿ ಪ್ರಶ್ನೆ ಪತ್ರಿಕೆಗಳನ್ನು ಮಂಡಲಿಯ ಜಾಲತಾಣ https://kseab.karnataka.gov.in ಮತ್ತು ಶಾಲಾ ಲಾಗಿನ್‌ನಲ್ಲಿ ಪ್ರಕಟಿಸಲಾಗಿರುತ್ತದೆ.

ಉಲ್ಲೇಖ-2ರ ಸುತ್ತೋಲೆಯಲ್ಲಿ 2022-23ನೇ ಸಾಲಿನ ಎಸ್‌ಎಸ್‌ಎಲ್‌ಸಿ ಪರೀಕ್ಷೆಯನ್ನು 2019-20ನೇ ಸಾಲಿನ ಪ್ರಶ್ನೆಪತ್ರಿಕೆಯ ಸ್ವರೂಪ ಮತ್ತು ಕಠಿಣತೆಯ ಮಟ್ಟವನ್ನು ಅನುಸರಿಸಿ ನಡೆಸಲು ಆದೇಶಿಸಿದ್ದು, ಈ ಕುರಿತು ಉಲ್ಲೇಖ-3ರ ಅಧಿಸೂಚನೆಯಲ್ಲಿ ಈಗಾಗಲೇ ತಿಳಿಸಲಾಗಿರುತ್ತದೆ.

**ಉಲ್ಲೇಖ-1ರ ಸರ್ಕಾರದ ಆದೇಶದನ್ವಯ 2022-23ನೇ ಸಾಲಿನ ಪೂರ್ವಸಿದ್ಧತಾ ಪರೀಕ್ಷೆಯ ಮಾದರಿ ಪ್ರಶ್ನೆಪತ್ರಿಕೆಗಳನ್ನು ಬಿಇಓ ಲಾಗಿನ್‌ಗೆ ಅಪ್‌ಲೋಡ್ ಮಾಡಲಾಗಿರುತ್ತದೆ. ಆಯಾ ಕ್ಷೇತ್ರ ಶಿಕ್ಷಣಾಧಿಕಾರಿಗಳು ತಮ್ಮ ಹಂತದಲ್ಲಿ ವಿಷಯಪರಿಣಿತ ಶಿಕ್ಷಕರನ್ನು ನಿಯೋಜಿಸಿಕೊಂಡು, ಮಂಡಳಿಯಿಂದ ಅಪ್‌ಲೋಡ್ ಮಾಡಲಾಗಿರುವ ಮಾದರಿ ಪ್ರಶ್ನೆಪತ್ರಿಕೆಯ ಅನುಸಾರ, ವಿಷಯವಾರು ಪ್ರಶ್ನೆಪತ್ರಿಕೆಯನ್ನು ಸಿದ್ಧಪಡಿಸಿಕೊಳ್ಳುವುದು. ಸದರಿ ಪ್ರಶ್ನೆಪತ್ರಿಕೆಗಳನ್ನು ತಾಲ್ಲೂಕು ಹಂತದ ಸ್ಟ್ರಾಂಗ್ ರೂಂನಲ್ಲಿ ಸುರಕ್ಷಿತವಾಗಿಟ್ಟು, ಮಂಡಲಿಯಿಂದ ಪ್ರಕಟಿಸಿರುವ ವೇಳಾಪಟ್ಟಿಯ ಅನುಸಾರ ಆಯಾ ದಿನದ ಪ್ರಶ್ನೆಪತ್ರಿಕೆಯನ್ನು ತಮ್ಮ ವ್ಯಾಪ್ತಿಯಲ್ಲಿ ಬರುವ ಸರ್ಕಾರಿ ಮತ್ತು ಸರ್ಕಾರದಿಂದ ಮಾನ್ಯತೆ ಪಡೆದ ಅನುದಾನಿತ ಹಾಗೂ ಅನುದಾನರಹಿತ ಶಾಲೆಗಳಿಗೆ ಅಯಾ ದಿನವೇ ಸುರಕ್ಷಿತವಾಗಿ ವಿತರಿಸುವುದು.**

ಮುಂದುವರೆದು, ಸದರಿ ಪೂರ್ವಸಿದ್ಧತಾ ಪರೀಕ್ಷೆಗೆ ಸರ್ಕಾರದ ಆದೇಶದಲ್ಲಿ ಸೂಚಿಸಿರುವಂತೆ ಪ್ರತಿ ವಿದ್ಯಾರ್ಥಿಯಿಂದ ರೂ.60/- ಮಾತ್ರ (ಅರವತ್ತು ರೂಪಾಯಿ ಮಾತ್ರ) ಪರೀಕ್ಷಾ ಶುಲ್ಕವನ್ನು ಸಂಬಂಧಿಸಿದ ಶಾಲಾ ಮುಖ್ಯೋಪಾಧ್ಯಾಯರ ಮುಖಾಂತರ ಬಿಇಓ ಬ್ಯಾಂಕ್ ಖಾತೆಗೆ ಪಡೆಯುವುದು ಹಾಗೂ ಶುಲ್ಕ ಸ್ವೀಕರಿಸಿದ ಮತ್ತು ಪರೀಕ್ಷಾ ಕಾರ್ಯವೆಚ್ಚಗಳ ಕುರಿತು ಲೆಕ್ಕಪತ್ರ ನಿರ್ವಹಿಸಿ ತಪಾಸಣಾ ಸಮಯದಲ್ಲಿ ಹಾಜರುಪಡಿಸತಕ್ಕದ್ದು.

ಸರ್ಕಾರದ ಆದೇಶದಲ್ಲಿ ಸೂಚಿಸಿರುವ ಎಲ್ಲಾ ಪೂರ್ವಸಿದ್ಧತೆಗಳನ್ನು ಹಾಗೂ ಮುನ್ನೆಚ್ಚರಿಕಾ ಕ್ರಮಗಳನ್ನು ಕೈಗೊಂಡು 2022-23ನೇ ಸಾಲಿನ ಪೂರ್ವ ಸಿದ್ಧತಾ ಪರೀಕ್ಷೆಯನ್ನು ಜಿಲ್ಲಾ ಉಪನಿರ್ದೇಶಕರು (ಆಡಳಿತ)ರವರ ನೇತೃತ್ವದಲ್ಲಿ ಹಾಗೂ ಕ್ಷೇತ್ರಶಿಕ್ಷಣಾಧಿಕಾರಿಗಳ ಹಂತದಲ್ಲಿ ಗೌಪ್ಯತೆ ಮತ್ತು ಸುರಕ್ಷತೆಯೊಂದಿಗೆ ವ್ಯವಸ್ಥಿತವಾಗಿ ನಡೆಸಲು ಸೂಕ್ತ ಕ್ರಮವಹಿಸುವಂತೆ ತಿಳಿಸಿದೆ.

**(ಮಾನ್ಯ ಅಧ್ಯಕ್ಷರು, ಕೆ.ಎಸ್.ಇ.ಎ.ಬಿ ರವರಿಂದ ಅನುಮೋದಿಸಲ್ಪಟ್ಟಿದೆ)**

1/2/2023

(ಹೆಚ್.ಎನ್.ಗೋಪಾಲಕೃಷ್ಣ)
ನಿರ್ದೇಶಕರು, ಪರೀಕ್ಷೆಗಳು

**ಗೆ,**

1. ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರು (ಆಡಳಿತ), ಸಾರ್ವಜನಿಕ ಶಿಕ್ಷಣ ಇಲಾಖೆರವರಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ.
2. ರಾಜ್ಯದ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳು, ಸಾರ್ವಜನಿಕ ಶಿಕ್ಷಣ ಇಲಾಖೆರವರಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ.
3. ಶಾಖಾಧಿಕಾರಿಗಳು, ಸಿ ಶಾಖೆ, ಬಿ ಶಾಖೆ ಮತ್ತು ಎಲ್ಲಾ ಪರಿಶೀಲನಾ ಶಾಖೆಯ ಶಾಖಾಧಿಕಾರಿಗಳಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ.
4. ಲೆಕ್ಕಾಧಿಕಾರಿಗಳು ಲೆಕ್ಕಪತ್ರಶಾಖೆ ರವರಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ.
5. ಶಾಖಾಧಿಕಾರಿಗಳು, ಗಣಕ ಶಾಖೆರವರಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ ಹಾಗೂ ಸುತ್ತೋಲೆ ಮತ್ತು ವೇಳಾಪಟ್ಟಿಯನ್ನು ಮಂಡಳಿಯ ಜಾಲತಾಣ ಹಾಗೂ ಶಾಲಾ ಲಾಗಿನ್‌ನಲ್ಲಿ ಪ್ರಕಟಿಸಲು.
6. ರಾಜ್ಯದ ಎಲ್ಲಾ ಸರ್ಕಾರಿ ಹಾಗೂ ಸರ್ಕಾರದಿಂದ ಮಾನ್ಯತೆ ಪಡೆದ ಅನುದಾನಿತ ಮತ್ತು ಅನುದಾನ ರಹಿತ ಪ್ರೌಢ ಶಾಲಾ ಮುಖ್ಯ ಶಿಕ್ಷಕರಿಗೆ (ಸಂಬಂಧಿಸಿದ ಬಿಇಓ ರವರ ಮುಖಾಂತರ).

**ಪ್ರತಿಯನ್ನು :-**

1. ಮಾನ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರುರವರಿಗೆ ಮಾಹಿತಿಗಾಗಿ ಗೌರವಗಳೊಂದಿಗೆ ಸಲ್ಲಿಸಿದೆ.
2. ಮಾನ್ಯ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರುರವರಿಗೆ ಮಾಹಿತಿಗಾಗಿ ಗೌರವಗಳೊಂದಿಗೆ ಸಲ್ಲಿಸಿದೆ.
3. ಮಾನ್ಯ ಅಧ್ಯಕ್ಷರು, ಕ.ಶಾ.ಪ.ಮೌ.ಮಂಡಲಿ, ಮಲ್ಲೇಶ್ವರಂ, ಬೆಂಗಳೂರುರವರಿಗೆ ಮಾಹಿತಿಗಾಗಿ ಗೌರವಗಳೊಂದಿಗೆ ಸಲ್ಲಿಸಿದೆ.
4. ಮಾನ್ಯ ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಕಲಬುರಗಿ ಮತ್ತು ಧಾರವಾಡರವರಿಗೆ ಮಾಹಿತಿಗಾಗಿ ಗೌರವಗಳೊಂದಿಗೆ ಸಲ್ಲಿಸಿದೆ.
5. ಕಛೇರಿ ಪ್ರತಿ.